# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 994 |
| 2 | ಸದಸ್ಯರ ಹೆಸರು | : | ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) |
| 3 | ಉತ್ತರಿಸುವ ದಿನಾಂಕ | : | 12-03-2020 |
| 4 | ಉತ್ತರಿಸುವವರು | : | ಮಾನ್ಯ ಮುಖ್ಯಮಂತ್ರಿಗಳು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ನಗರದಲ್ಲಿ ವೈಟ್‌ಟಾಪಿಂಗ್ ರಸ್ತೆ ಕಾಮಗಾರಿಯು ಕ್ಷಿಪ್ರಗತಿಯಲ್ಲಿ ನಡೆಯದೆ ಸಾರ್ವಜನಿಕರಿಗೆ ಧೂಳಿನ ಸಮಸ್ಯೆ ಸಂಚಾರ ದಟ್ಟಣೆ ರೀತಿಯ ಕಿರಿಕಿರಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ವೈಟ್ ಟಾಪಿಂಗ್ ಕಾಮಗಾರಿಯನ್ನು ನಿರ್ವಹಿಸುವ ಸಮಯದಲ್ಲಿ ಸರ್ಕಾರದ ವಿವಿಧ ಅಂಗ ಸಂಸ್ಥೆಗಳಾದ ಬಿಡಬ್ಲ್ಯೂಎಸ್‌ಎಸ್‌ಬಿ, ಬೆಸ್ಕಾಂ, ಕೆ.ಪಿ.ಟಿ.ಸಿ.ಎಲ್ ಹಾಗೂ Traffic Police ರವರ ಸಹಕಾರದೊಂದಿಗೆ ಸಮನ್ವಯ ಸಾಧಿಸಿಕೊಂಡು ನಿರ್ವಹಿಸಬೇಕಾಗಿದ್ದು, ಸಾಧ್ಯವಾದಷ್ಟು ಕಡಿಮೆ ಅವಧಿಯಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಲು ಕ್ರಮ ವಹಿಸಲಾಗುತ್ತಿದೆ. ನಿರ್ಮಾಣದ ಅವಧಿಯಲ್ಲಿ ವಾಹನ ಸಂಚಾರ ಬದಲಾವಣೆ ಮಾಡಿಕೊಳ್ಳುವುದರಿಂದ ವಾಹನ ಸಂಚಾರ ದಟ್ಟಣೆ ಮತ್ತು ಧೂಳಿನ ಸಮಸ್ಯೆಯನ್ನು ನಿವಾರಿಸುವ ದೃಷ್ಠಿಯಿಂದ ರಸ್ತೆ ಅಗೆತವನ್ನು ಕೂಡಲೇ ಡಾಂಬರೀಕರಣಗೊಳಿಸಲಾಗುತ್ತಿದೆ. ಕಾಮಗಾರಿ ಪೂರ್ಣಗೊಂಡ ನಂತರ ಹಾಗೂ ರಸ್ತೆಯನ್ನು ಶುಚಿಗೊಳಿಸಿದ ನಂತರ ವಾಹನ ಸಂಚಾರಕ್ಕೆ ಅನುವು ಮಾಡಿಕೊಡಲಾಗುತ್ತಿದೆ. |
| ಆ) | ಬಂದಿದ್ದಲ್ಲಿ, ಒಂದು ಕ್ಷೇತ್ರದ ವೈಟ್‌ಟ್ಯಾಪಿಂಗ್ ಕಾಮಗಾರಿಯ ಕಾಲಮಿತಿ ಎಷ್ಟು; ವೈಟ್ ಟ್ಯಾಪಿಂಗ್ ಕಾಮಗಾರಿ ವಿಳಂಬ ಧೋರಣೆಯನ್ನು ತೊಡೆದು ಹಾಕುವಲ್ಲಿ ಸರ್ಕಾರವು ಕೈಗೊಂಡ ಕ್ರಮಗಳೇನು; | • ವೈಟ್‌ಟಾಪಿಂಗ್ ಯೋಜನೆಯನ್ನು ನಗರದ ಪ್ರಮುಖ ರಸ್ತೆಗಳಲ್ಲಿ ಕೈಗೊಳ್ಳುತ್ತಿದ್ದು, ಹಾಲಿ ಚಲಿಸುತ್ತಿರುವ ವಾಹನ ಸಂಚಾರವನ್ನು ಬದಲೀ ವ್ಯವಸ್ಥೆ ರೂಪಿಸಿ ಕಾಮಗಾರಿ ಕೈಗೆತ್ತಿಕೊಳ್ಳಲಾಗುತ್ತಿದೆ.<br>• ಬದಲೀ ಸಂಚಾರ ವ್ಯವಸ್ಥೆಯು ಲಭ್ಯವಿಲ್ಲದ ಸಂದರ್ಭದಲ್ಲಿ ರಸ್ತೆಯ ಅರ್ಧ ಭಾಗಕ್ಕೆ ವೈಟ್‌ಟಾಪಿಂಗ್ ನಿರ್ವಹಿಸಿ ತದನಂತರ ಉಳಿದ ಅರ್ಧ ಭಾಗದ ಕಾಮಗಾರಿ ಕೈಗೊಳ್ಳಬೇಕಾಗಿದ್ದು, ಇದರಿಂದ ಯೋಜನೆ ಅನುಷ್ಠಾನ ವಿಳಂಬವಾಗುತ್ತಿದೆ.<br>• ವೈಟ್‌ಟಾಪಿಂಗ್ ಯೋಜನೆಯನ್ನು ಪ್ರಮುಖ ರಸ್ತೆಗಳಲ್ಲಿ ಕೈಗೊಂಡಿರುವುದರಿಂದ ವಾಹನ ದಟ್ಟಣೆ ಹೆಚ್ಚಿರುವ ಹಿನ್ನೆಲೆಯಲ್ಲಿ ಏಕ ಕಾಲದಲ್ಲಿ ಎಲ್ಲಾ ರಸ್ತೆಗಳಲ್ಲಿ ಕಾಮಗಾರಿ ಪ್ರಾರಂಭಿಸುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುವುದನ್ನು ತಪ್ಪಿಸಲು ಭಾಗಶಃ ರಸ್ತೆಗಳಲ್ಲಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುತ್ತಿದೆ.<br>• ಸದರಿ ರಸ್ತೆಗಳಲ್ಲಿ ಅಗತ್ಯ ಮೂಲಸೌಕರ್ಯಗಳಾದ ಬೆಸ್ಕಾಂ, ಬಿಡಬ್ಲ್ಯೂಎಸ್‌ಎಸ್‌ಬಿ ಇತರೆ ಇಲಾಖೆಗಳಿಗೆ ಸಂಬಂಧಪಟ್ಟ ಉಪಯುಕ್ತ ಸಾಧನಗಳನ್ನು ಸ್ಥಳಾಂತರಿಸಿದ ನಂತರವೇ ಕಾಮಗಾರಿ ನಿರ್ವಹಿಸಬೇಕಿರುತ್ತದೆ. ಮುಂದುವರೆದು, ಅನೇಕ ರಸ್ತೆಗಳಲ್ಲಿ ಬಿಡಬ್ಲ್ಯೂಎಸ್‌ಎಸ್‌ಬಿ ಇಲಾಖೆಯ ಕೊಳವೆಗಳು ನಿಖರವಾಗಿ ಗುರುತಿಸಲ್ಪಡದ ಕಾರಣ ಮತ್ತು ಯಾವ ಕೊಳವೆಗಳನ್ನು ಸ್ಥಳಾಂತರಿಸ ಬೇಕೆಂಬ ತೀರ್ಮಾನವನ್ನು ವಿವಿಧ ಇಲಾಖೆಗಳ ಸಮನ್ವಯದೊಂದಿಗೆ |

| | | |
|---|---|---|
| | | ಮಾಡುತ್ತಿರುವುದರಿಂದ ಕಾಮಗಾರಿ ಪ್ರಗತಿಯಲ್ಲಿ ವಿಳಂಬವಾಗುತ್ತಿದೆ.<br>ವೈಟ್‌ಟಾಪಿಂಗ್ ನಿರ್ವಹಿಸಿದ ರಸ್ತೆಯಲ್ಲಿ ಕಾಂಕ್ರೀಟ್ ಕ್ಯೂರಿಂಗ್ ಸಮಯ ಮುಗಿದ ನಂತರವೇ ವಾಹನ ಸಂಚಾರಕ್ಕೆ ಮುಕ್ತಗೊಳಿಸಬೇಕಾಗಿರುತ್ತದೆ. ಹಗಲು ವೇಳೆಯಲ್ಲಿ ಅಗತ್ಯ ಕಾಂಕ್ರೀಟ್ ಸರಬರಾಜು ಮಾಡಲು ಕಾಂಕ್ರೀಟ್ ವಾಹನಗಳನ್ನು ಸರಿಯಾದ ಸಮಯಕ್ಕೆ ಕಾಮಗಾರಿ ಸ್ಥಳ ತಲುಪಲು ಕಷ್ಟಸಾಧ್ಯವಾಗಿದ್ದು ಮತ್ತು ಹೆಚ್ಚಿನ ಉಷ್ಣಾಂಶದಲ್ಲಿ ವೈಟ್‌ಟಾಪಿಂಗ್ ಕಾಮಗಾರಿ ಕೈಗೊಳ್ಳಲು ಸಾಧ್ಯವಿರುವುದಿಲ್ಲವಾದ್ದರಿಂದ ಕೇವಲ ರಾತ್ರಿ ವೇಳೆಯಲ್ಲಿ ಮಾತ್ರ ಕಾಮಗಾರಿ ನಿರ್ವಹಿಸುತ್ತಿರುವುದರಿಂದ ಕಾಮಗಾರಿ ವಿಳಂಬಕ್ಕೆ ಕಾರಣವಾಗಿದೆ. |
| ಇ) | ಬೆಂಗಳೂರು ನಗರದ ಬಹಳಷ್ಟು ಕಡೆ ರಸ್ತೆಗಳು ಸರಿಯಾದ ಗುಣಮಟ್ಟದಿಂದ ಕೂಡಿರದೆ ಬಹಳಷ್ಟು ವರ್ಷಗಳಿಂದ ರಸ್ತೆಗಳು ದುರಸ್ತಿ ಆಗದೇ ಹಾಗೇ ಉಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಗಮನಕ್ಕೆ ಬಂದಿದೆ |
| ಈ | ಬಂದಿದ್ದಲ್ಲಿ, ಬೆಂಗಳೂರಿನ ಎಲ್ಲಾ ಕ್ಷೇತ್ರಗಳಲ್ಲಿ ರಸ್ತೆಗಳು ಉನ್ನತ ಗುಣಮಟ್ಟದಿಂದ ಇರುವಂತೆ ಸರ್ಕಾರವು ಕೈಗೊಂಡ ಕ್ರಮಗಳೇನು; ಯಾವ ಕಾಲಮಿತಿಯೊಳಗೆ ರಸ್ತೆಗಳನ್ನು ಸರಿಪಡಿಸಲಾಗುವುದು? | 2016-17ನೇ ಸಾಲಿನ ನಗರೋತ್ಥಾನ ಮತ್ತು ಬಂಡವಾಳ ಬೆಂಬಲ ಯೋಜನೆಯಡಿ ಸರ್ಕಾರವು ರೂ. 800.00 ಕೋಟಿ ಅನುದಾನದಲ್ಲಿ ಬೆಂಗಳೂರು ನಗರದ 93.47 ಕಿ.ಮೀ ಉದ್ದದ ಪ್ರಮುಖ 29 ರಸ್ತೆಗಳು ಮತ್ತು 6 ಜಂಕ್ಷನ್‌ಗಳಿಗೆ ವೈಟ್ ಟಾಪಿಂಗ್ ಕಾಮಗಾರಿ ಅನುಷ್ಠಾನಗೊಳಿಸಲಾಗುತ್ತಿದೆ. ಸದರಿ ಸಾಲಿನಲ್ಲಿ 2- ಪ್ಯಾಕೇಜ್ ಗಳನ್ನು ಕೈಗೊಳ್ಳಲಾಗುತ್ತಿದ್ದು, ಸೆಪ್ಟೆಂಬರ್ ಅಂತ್ಯದೊಳಗೆ ಕಾಮಗಾರಿ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.<br><br>2017-18ನೇ ಸಾಲಿನ ಬಂಡವಾಳ ಬೆಂಬಲ ಯೋಜನೆಯಡಿ ಸರ್ಕಾರವು ರೂ. 690.00 ಕೋಟಿ ಅನುದಾನದಲ್ಲಿ ಬೆಂಗಳೂರು ನಗರದ 58.07 ಕಿ.ಮೀ ಉದ್ದದ ಪ್ರಮುಖ 39 ರಸ್ತೆಗಳು ವೈಟ್ ಟಾಪಿಂಗ್ ಕಾಮಗಾರಿ ಅನುಷ್ಠಾನಗೊಳಿಸಲಾಗುತ್ತಿದೆ. ಸದರಿ ಸಾಲಿನಲ್ಲಿ 8-ಪ್ಯಾಕೇಜ್‌ಗಳನ್ನು ಕೈಗೊಳ್ಳಲಾಗುತ್ತಿದ್ದು, ಮಾರ್ಚ್ 2021ರ ಅಂತ್ಯದೊಳಗೆ ಕಾಮಗಾರಿ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.<br><br>ಮುಂದುವರೆದು, 2018-19, 2019-20 ಮತ್ತು 2020-2021 ಸಾಲಿನಲ್ಲಿ ಮುಖ್ಯಮಂತ್ರಿಗಳ ನವ ನಗರೋತ್ಥಾನ ಯೋಜನೆಯಲ್ಲಿ ಬಿಬಿಎಂಪಿ ವ್ಯಾಪ್ತಿಯ ರಸ್ತೆಗಳು ಮತ್ತು ಉನ್ನತೀಕರಣಕ್ಕಾಗಿ ಒಟ್ಟು ರೂ.4107.34 ಕೋಟಿಗಳ ಕ್ರಿಯಾ ಯೋಜನೆಗೆ ಅನುಮೋದನೆ ನೀಡಿದ್ದು, ಕಾಮಗಾರಿಗಳು ಪ್ರಗತಿಯಲ್ಲಿವೆ. |

ಸಂಖ್ಯೆ: ನಅಇ 37 ಎಂಎನ್‌ವೈ 2020

ಬಿ.ಎಸ್. ಯಡಿಯೂರಪ್ಪ

(ಬಿ.ಎಸ್. ಯಡಿಯೂರಪ್ಪ.)

ಮುಖ್ಯಮಂತ್ರಿ